ಕರ್ನಾಟಕ ಸರ್ಕಾರ

# (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ)

**ಉಪನಿರ್ದೇಶಕರ ಕಛೇರಿ, ಕೊಠಡಿ ಸಂಖ್ಯೆ:206, 2ನೇ ಮಹಡಿ, ಜಿಲ್ಲಾಡಳಿತ ಭವನ, ಬೀರಸಂದ್ರ**
**ದೇವನಹಳ್ಳಿ ತಾಲ್ಲೂಕು-562110, ಬೆಂಗಳೂರು ಗ್ರಾಮಾಂತರ ಜಿಲ್ಲೆ**

---

ಸಂ:ಉಪನಿ/ಬೆಂಗ್ರಾ/ಐಸಿಡಿ/ಅಂ.ಕಾ/ಅಂ.ಸ/ಖಾ.ಹುದ್ದೆ/2021-22 ದಿನಾಂಕ07.07.2021

## ಅಧಿಸೂಚನೆ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ 4 ತಾಲ್ಲೂಕುಗಳ ಸಮಗ್ರ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿಯಿರುವ 28 ಅಂಗನವಾಡಿ ಕಾರ್ಯಕರ್ತೆ ಮತ್ತು 68 ಅಂಗನವಾಡಿ ಸಹಾಯಕಿಯರ ಗೌರವ ಸೇವೆಯ ಹುದ್ದೆಗಳಿಗೆ ನೇಮಕ ಮಾಡಲು ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. ಈ ಸಂಬಂಧ ಹೆಚ್ಚಿನ ವಿವರಗಳಿಗೆ ಸಂಬಂಧಪಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳನ್ನು ಕಛೇರಿಯ ವೇಳೆಯಲ್ಲಿ ಸಂಪರ್ಕಿಸಲು ಕೋರಿದೆ.

| | |
|---|---|
| ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಪ್ರಾರಂಭದ ದಿನಾಂಕ | 09.07.2021 |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 09.08.2021 |
| ವೆಬ್ ಸೈಟ್ ವಿಳಾಸ | www.anganwadirecruit.kar.nic.in |

ಉಪ ನಿರ್ದೇಶಕರು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಬೆಂಗಳೂರು ಗ್ರಾಮಾಂತರ ಜಿಲ್ಲೆ.

ಕರ್ನಾಟಕ ಸರ್ಕಾರ

# (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ)

**ಉಪನಿರ್ದೇಶಕರ ಕಛೇರಿ, ಕೊಠಡಿ ಸಂಖ್ಯೆ:206, 2ನೇ ಮಹಡಿ, ಜಿಲ್ಲಾಡಳಿತ ಭವನ, ಬೀರಸಂದ್ರ ದೇವನಹಳ್ಳಿ ತಾಲ್ಲೂಕು-562110, ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೂರವಾಣಿ ಸಂಖ್ಯೆ:08029787445**

ಸಂ:ಉಪನಿ/ಬೆಂಗ್ರಾ/ಐಸಿಡಿ/ಅಂ.ಕಾ/ಅಂ.ಸಹಾಯಕಿ/ನೇ.ಪ್ರಕಟಣೆ/2021-22 ದಿನಾಂಕ07.07.2021

ವಿಷಯ: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ 4 ತಾಲ್ಲೂಕುಗಳಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ/ಸಹಾಯಕಿರ ಹುದ್ದೆಗಳನ್ನು ಭರ್ತಿ ಮಾಡಲು ಆರ್ಹ ಅಭ್ಯರ್ಥಿಗಳಿಂದ ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನಿಸುವ ಬಗ್ಗೆ.

ಉಲ್ಲೇಖ: ಸರ್ಕಾರ ಆದೇಶ ಸಂಖ್ಯೆ:ಮಮಇ/303/ಐಸಿಡಿ/2017 ದಿನಾಂಕ:23.09.2017

*****

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲಾ ವ್ಯಾಪ್ತಿಯ 4 ಸಮಗ್ರ ಶಿಶು ಅಭಿವೃದ್ಧಿ ಯೋಜನೆಗಳ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳಿಗೆ ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರಿಗೆ ಗೌರವ ಸೇವೆ ಸಲ್ಲಿಸಲು ಈ ಕೆಳಗೆ ತೋರಿಸಲಾದ ಮಿಸಲಾತಿ ಹೊಂದಿದ 18 ರಿಂದ 35 ವರ್ಷದೊಳಗಿನ ಆರ್ಹ ಸ್ಥಳೀಯ (ಅದೇ ಗ್ರಾಮ) ಮಹಿಳಾ ಅಭ್ಯರ್ಥಿಗಳಿಂದ ಈ ಕೆಳಗೆ ತೋರಿಸಲಾದ ನಮೂನೆಯಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಅಂಗನವಾಡಿ ಕಾರ್ಯಕರ್ತೆಯರಾಗಲು ಎಸ್.ಎಸ್.ಎಲ್.ಸಿ ತೇರ್ಗಡೆಯಾಗಿರಬೇಕು ಅಂಗನವಾಡಿ ಸಹಾಯಕಿಯಾಗಲು ಕನಿಷ್ಠ 4ನೇ ತರಗತಿ ತೇರ್ಗಡೆಯಾಗಿದ್ದು, ಗರಿಷ್ಠ ವಿದ್ಯಾರ್ಹತೆ 9ನೇ ತರಗತಿ ತೇರ್ಗಡೆಯಾಗಿರಬೇಕು. ಆರ್ಹ ಅಭ್ಯರ್ಥಿಗಳು ಈ ಕೆಳಗೆ ತೋರಿಸಲಾದ ಎಲ್ಲಾ ದಾಖಲಾತಿಗಳೊಂದಿಗೆ ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ:09.07.2021 ರಿಂದ 09.08.2021 ಸಂಜೆ 5.30 ಗಂಟೆಯೊಳಗಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

**ಆನ್‌ಲೈನ್ ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲಾತಿಗಳು:**

1. ಅರ್ಜಿ ನಿಗದಿತ ನಮೂನೆಯಲ್ಲಿ (ಆನ್‌ಲೈನ್)
2. ಜನನ ಪ್ರಮಾಣ ಪತ್ರ/ಜನ್ಮ ದಿನಾಂಕ ಇರುವ ಎಸ್.ಎಸ್.ಎಲ್.ಸಿ ಅಂಕಪಟ್ಟಿ
3. ನಿಗದಿತ ವಿದ್ಯಾರ್ಹತೆ ಅಂಕಪಟ್ಟಿ
4. ತಹಶೀಲ್ದಾರರು/ಉಪತಹಶೀಲ್ದಾರರಿಂದ ಪಡೆದ ಮೂರು (3) ವರ್ಷದೊಳಗಿನ ವಾಸಸ್ಥಳ ದೃಢಿಕರಣ ಪತ್ರ
5. ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರ.
6. ಪತಿಯ ಮರಣ ಪ್ರಮಾಣ ಪತ್ರ (ವಿಧವಾ ವೇತನ ದೃಢೀಕರಣವನ್ನು ಪರಿಗಣಿಸುವುದಿಲ್ಲ.)
7. ಆತ್ಮಹತ್ಯೆ ಮಾಡಿಕೊಂಡ ರೈತರ ಪತ್ನಿ ಎಂದು ಉಪವಿಭಾಗಾಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ
8. ಅಂಗವಿಕಲತೆ ಪ್ರಮಾಣ ಪತ್ರ (ಅಂಗವಿಕಲ ವೇತನ ದೃಢೀಕರಣವನ್ನು ಪರಿಗಣಿಸುವುದಿಲ್ಲ.)
9. ವಿಚ್ಛೇದನಾ ಪ್ರಮಾಣ ಪತ್ರ (ನ್ಯಾಯಾಲಯದಿಂದ ಪಡೆದಿರಬೇಕು)
10. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ನಡೆಸಲ್ಪಟ್ಟ ಮಾಜಿ ದೇವದಾಸಿಯರ ಸಮೀಕ್ಷೆಯ ಪಟ್ಟಿಯಲ್ಲಿರುವ ಮಾಜಿ ದೇವದಾಸಿಯರ ಮಕ್ಕಳು ಎಂಬುದರ ಬಗ್ಗೆ ಮಹಿಳಾ ಅಭಿವೃದ್ಧಿ ನಿಗಮದ ಅಧಿಕಾರಿಗಳಿಂದ ಪ್ರಮಾಣ ಪತ್ರ
11. ಪರಿತ್ಯಕ್ತೆ ಎಂಬ ಬಗ್ಗೆ ಗ್ರಾಮ ಪಂಚಾಯತ್‌ನಿಂದ ಪಡೆದ ಪ್ರಮಾಣ ಪತ್ರ
12. ಇಲಾಖೆಯ ಸುಧಾರಣಾ ಸಂಸ್ಥೆ/ರಾಜ್ಯ ಮಹಿಳಾ ನಿಲಯಗಳ ನಿವಾಸಿ ಎಂಬ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.
13. ಯೋಜನಾ ನಿರಾಶ್ರಿತರೆಂಬ ಬಗ್ಗೆ ತಹಶೀಲ್ದಾರರಿಂದ ಪಡೆದ ಪ್ರಮಾಣ ಪತ್ರ.

ಉಪ ನಿರ್ದೇಶಕರು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಬೆಂಗಳೂರು ಗ್ರಾಮಾಂತರ ಜಿಲ್ಲೆ.

# CALENDAR FOR EVENTS

ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ನೇಮಕಾತಿ ಪ್ರಕ್ರಿಯೆಯನ್ನು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲು ಈ ಕೆಳಕಂಡಂತೆ ಕ್ರಮವಹಿಸಲಾಗಿದೆ.

| | |
|---|---|
| WEBSITE : ವಿಳಾಸ | www.anganawadirecruit.kar.nic.in |

## ವೇಳಾ ಪಟ್ಟಿ

| ವಿವರಣೆ | ದಿನಗಳು | ದಿನಾಂಕ |
|---|---|---|
| ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ | -- | 09.07.2021 |
| ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 30 ದಿನ | 09.08.2021 ಸಂಜೆ 5.30 ಗಂಟೆವರೆಗೆ |
| ಆಯ್ಕೆ ಸಮಿತಿ ಸದಸ್ಯರು ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಂದ ಎನ್.ಐ.ಸಿ.ಯಲ್ಲಿ ಸ್ವೀಕರಿಸಲಾದ ಅರ್ಜಿಗಳ ಪರಿಶೀಲನೆ | - | 15.08.2021 |
| ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಆಯ್ಕೆ ಸಮಿತಿಯಿಂದ ಅನುಮೋದನೆ ಪಡೆಯುವುದು. | - | 31.08.2021 |
| ಆಯ್ಕೆಯಾದ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟಣೆ ಹಾಗೂ ಸಾರ್ವಜನಿಕ ಆಕ್ಷೇಪಣೆ ಸಲ್ಲಿಸುವಿಕೆಗೆ ಕಾಲಾವಕಾಶ | - | 15.09.2021ರಿಂದ 24.09.2021 |
| ಆಕ್ಷೇಪಣೆ ಬಂದ ಅಭ್ಯರ್ಥಿಗಳ ದಾಖಲಾತಿ ಪರಿಶೀಲನೆ | 3 ದಿನ | 27.09.2021ರಿಂದ 29.09.2021 |
| ಪರಿಶೀಲನೆ ನಂತರ ಆಯ್ಕೆ ಸಮಿತಿಯ ಸಭೆ ನಡೆಸಿ ಅಂತಿಮಪಟ್ಟಿಗೆ ಅನುಮೋದನೆ ಪಡೆಯುವುದು. | - | 15.10.2021 |

for ಉಪ ನಿರ್ದೇಶಕರು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಬೆಂಗಳೂರು ಗ್ರಾಮಾಂತರ ಜಿಲ್ಲೆ.